**ಓ.ಎಸ್. ನಂ. 93/2020** **ಡಿ.ಡಬ್ಲ್ಯೂ- 2**

**<u>ಸಾಕ್ಷಿಯನ್ನು ದಿನಾಂಕ 14.2.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಪಾಟೀ ಸವಾಲುಃ ವಾದಿ ಪರ ಶ್ರೀ ಹೆಚ್.ಜಿ.ವಿ ವಕೀಲರಿಂದಃ</u>

2 ನೇ ಪ್ರತಿವಾದಿ ನಮ್ಮ ಊರಿನವರಾಗಿರುತ್ತಾರೆ. ಈ ಕೇಸಿನಲ್ಲಿ ಸಾಕ್ಷಿ ನುಡಿಯಲು ನ್ಯಾಯಾಲಯದಿಂದ ಯಾವುದೇ ಸಮನ್ಸ ಬಂದಿರುವುದಿಲ್ಲ. ನನ್ನನ್ನು 1 ನೇ ಪ್ರತಿವಾದಿ ಸಾಕ್ಷಿ ನುಡಿಯಲು ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿರುತ್ತಾರೆ. ವಾದಿಯು ಈ ದಾವೆಯಲ್ಲಿ ಏನು ಪರಿಹಾರ ಕೋರಿರುತ್ತಾರೆ ಎಂದರೆ ಸಾಕ್ಷಿದಾರರು ಖಾತೆ ಮಾಡಿಸಿಕೊಡುತ್ತೇನೆ ಎಂದು ಹೇಳಿ ಕ್ರಯದ ಕರಾರುಪತ್ರ ಮಾಡಿಸಿಕೊಂಡಿರುತ್ತಾರೆ ಎಂದು ದಾವೆ ಹೂಡಿರುತ್ತಾರೆ ಎನ್ನುವರು. ನನಗೆ 1 ನೇ ಪ್ರತಿವಾದಿ ಮೋಸದಿಂದ ಕರಾರು ಪತ್ರ ಮಾಡಿಸಿಕೊಂಡಿರುತ್ತಾರೆ ಎಂದು ಹೇಳಿರುತ್ತಾರೆ. ಈ ದಾವೆಯಲ್ಲಿ ನ್ಯಾಯಾಲಯದಿಂದ ಸಮನ್ಸ ಬಂದಾಗ ಹೇಳಿರುತ್ತಾರೆ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಆರ್.ಆರ್.ಟಿ ಪ್ರಕರಣದ ಸಂಖ್ಯೆ ನನಗೆ ಗೊತ್ತಿರುವುದಿಲ್ಲ. ಅದನ್ನು ಪ್ರತಿವಾದಿಯರು ಸಿದ್ದೇಗೌಡರ ವಿರುದ್ಧ ದಾಖಲಿಸಿದ್ದರು. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಸಿವಿಲ್ ನ್ಯಾಯಾಲಯದಲ್ಲಿ ದಾಖಲಿಸಿರುವ ಸಂಖ್ಯೆ ನನಗೆ ಗೊತ್ತಿರುವುದಿಲ್ಲ. ವಾದಿ ಮತ್ತು 1 ನೇ ಪ್ರತಿವಾದಿಯ ನಡುವೆ ಆಗಿರುವ ಕ್ರಯದ ಕರಾರುಪತ್ರದ ಸಮಯದಲ್ಲಿ ನಾನು ಹಾಜರಿರಲಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿರುವ ವಿಚಾರಗಳನ್ನು ಓದಿಸಿ ತಿಳಿದುಕೊಂಡಿರುತ್ತೇನೆ. ದಾವಆಸ್ತಿಯು ಕಡಕೊಳ ಗ್ರಾಮದಲ್ಲಿರುತ್ತದೆ. ಅದರ ಸರ್ವೆ ನಂ.5/14 ಆಗಿರುತ್ತದೆ. ಪ್ರತಿವಾದಿಯರು ನಮ್ಮ ಊರಿನವರಾಗಿರುವುದರಿಂದ ದಾವೆಯ ಬಗ್ಗೆ ಯಾವುದೇ ಮಾಹಿತಿ ಇರದಿದ್ದರೂ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.